**ಕರ್ನಾಟಕ ಸರ್ಕಾರ**
ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
ಫ್ಲಾಟ್ ನಂ.1-4, ಕೆ.ಎಸ್.ಐ.ಐ.ಡಿ.ಸಿ, ಐ.ಟಿ.ಪಾರ್ಕ್, 5ನೇ ಮಹಡಿ,
ಸೌತ್ ಬ್ಲಾಕ್, ರಾಜಾಜಿನಗರ ಇಂಡಸ್ಟ್ರಿಯಲ್ ಎಸ್ಟೇಟ್ ಬೆಂಗಳೂರು-560010
ದೂರವಾಣಿ ಸಂಖ್ಯೆ:080-22322738, ಇ-ಮೇಲ್:nrega@karnataka.gov.in

No:RDC-EGS/02/2021(E-407800) ದಿನಾಂಕ:11-10-2022

# <u>ಸುತ್ತೋಲೆ</u>

**<u>ವಿಷಯ</u>:** ಮಹಾತ್ಮಗಾಂಧಿ ನರೇಗಾ ಯೋಜನೆಯಡಿ "ಮಹಿಳೆಯರ ಭಾಗವಹಿಸುವಿಕೆ" ಹೆಚ್ಚಿಸಲು **"ಮಹಿಳಾ ಉದ್ಯೋಗ ಸಬಲೀಕರಣ ಅಭಿಯಾನ"** ಹಾಗೂ**"ವಿಶೇಷ ಮಹಿಳಾ ಗ್ರಾಮ ಸಭೆ"**ಗಳನ್ನು ನಡೆಸುವ ಕುರಿತು.

**<u>ಉಲ್ಲೇಖ</u>:** ಈ ಕಛೇರಿಯ ಪತ್ರ ಸಂಖ್ಯೆ: RDC-EGS/02/2021, ದಿನಾಂಕ:12-01-2021.

*******

ಮಹಾತ್ಮಗಾಂಧಿ ನರೆಗಾ ಯೋಜನೆಯಡಿ ಮಹಿಳೆಯರಿಗೆ ಸಮಾನ ಕೆಲಸ ಹಾಗೂ ಪುರುಷರಿಗೆ ನೀಡುವಷ್ಟೇ ಸಮಾನ ವೇತನವನ್ನು ನೀಡಲಾಗುತ್ತಿದೆ. ಮಹಿಳೆಯರ ಭಾಗವಹಿಸುವಿಕೆಯನ್ನು ಹೆಚ್ಚಿಸಲು ಜನವರಿ 15, 2021 ರಿಂದ **"ಮಹಿಳಾ ಕಾಯಕೋತ್ಸವ"**ವನ್ನು ಹಮ್ಮಿಕೊಳ್ಳಲಾಗಿದ್ದು, ಪರಿಣಾಮವಾಗಿ ಮಹಿಳೆಯರ ಭಾಗವಹಿಸುವಿಕೆಯಲ್ಲಿ ಗಣನೀಯ ಹೆಚ್ಚಳ ಕಂಡುಬಂದಿರುತ್ತದೆ.

ಮಹಾತ್ಮಗಾಂಧಿ ನರೆಗಾ ಯೋಜನೆಯಡಿ ಮಹಿಳೆಯರ ಭಾಗವಹಿಸುವಿಕೆಯನ್ನು ಮತ್ತಷ್ಟು ಹೆಚ್ಚಿಸಲು ಹಾಗೂ ಲಿಂಗತ್ವ ಅಲ್ಪಸಂಖ್ಯಾತರನ್ನು ಯೋಜನೆಯ ವ್ಯಾಪ್ತಿಗೆ ತರಲು ಅಕ್ಟೋಬರ್ ಮತ್ತು ನವೆಂಬರ್ ತಿಂಗಳಿನಲ್ಲಿ **"ಮಹಿಳಾ ಉದ್ಯೋಗ ಸಬಲೀಕರಣ ಅಭಿಯಾನ"**ವನ್ನು ಹಮ್ಮಿಕೊಳ್ಳಲು ಉದ್ದೇಶಿಸಲಾಗಿದೆ.

**ಅಭಿಯಾನದ ಉದ್ದೇಶಗಳು:**

1. ಮಹಾತ್ಮಗಾಂಧಿ ನರೇಗಾ ಯೋಜನೆಯಡಿ ಮಹಿಳೆಯರ ಭಾಗವಹಿಸುವಿಕೆ ಪ್ರಮಾಣವನ್ನು ಶೇ.60ಕ್ಕೆ ಹೆಚ್ಚಿಸುವುದು.
2. ಲಿಂಗತ್ವ ಅಲ್ಪಸಂಖ್ಯಾತರಿಗೆ ನರೇಗಾ ಯೋಜನೆಯಡಿ ಜಾಬ್‌ಕಾರ್ಡ್ ಮತ್ತು ಅಕುಶಲ ಕೆಲಸ ಒದಗಿಸುವುದು.
3. ಮಹಿಳೆಯರು ಮತ್ತು ಲಿಂಗತ್ವ ಅಲ್ಪಸಂಖ್ಯಾತರಿಗೆ ನರೇಗಾ ಯೋಜನೆಯ ವೈಯಕ್ತಿಕ ಸೌಲಭ್ಯಗಳನ್ನು ದೊರಕಿಸಿಕೊಟ್ಟು, ಆರ್ಥಿಕವಾಗಿ ಸಬಲೀಕರಣಗೊಳಿಸುವುದು.
4. ಕಾಮಗಾರಿ ಸ್ಥಳಗಳನ್ನು ಮಹಿಳೆ ಮತ್ತು ಮಕ್ಕಳ ಸ್ನೇಹಿಯನ್ನಾಗಿ ಮಾಡುವುದು.
5. ಮಹಾತ್ಮಗಾಂಧಿ ನರೇಗಾ ಯೋಜನೆಯಡಿ ಸ್ವ-ಸಹಾಯ ಸಂಘಗಳ ಭಾಗವಹಿಸುವಿಕೆಗೆ ಉತ್ತೇಜನ ನೀಡುವುದು ಹಾಗೂ ಮಹಿಳೆಯರು ಯೋಜನೆಯಡಿ ಹೆಚ್ಚಿನ ಪ್ರಮಾಣದಲ್ಲಿ ಭಾಗವಹಿಸುವಂತೆ ಪ್ರೇರೇಪಿಸಲು ಮಹಿಳಾ ಕಾಯಕ ಬಂಧುಗಳಿಗೆ ತರಬೇತಿ ನೀಡುವುದು.
6. ಹಳ್ಳಿ ಸಂತೆಗಳಲ್ಲಿ ಸ್ವ-ಸಹಾಯ ಸಂಘಗಳ ಭಾಗವಹಿಸುವಿಕೆಯನ್ನು ಉತ್ತೇಜಿಸುವುದು ಮತ್ತು ವಾರದ ಸಂತೆ ಹೊರತುಪಡಿಸಿ ಉಳಿದ ದಿನಗಳಲ್ಲಿ ಸ್ವ-ಸಹಾಯ ಗುಂಪುಗಳಿಗಾಗಿ ದಿನ ನಿತ್ಯ ಉಪಯೋಗಿಸುವ ವಸ್ತುಗಳ ಮಾರಾಟ ಮೇಳ ಆಯೋಜಿಸುವುದು.

**ಮಹಿಳಾ ಉದ್ಯೋಗ ಸಬಲೀಕರಣ ಅಭಿಯಾನದ ಪೂರ್ವಸಿದ್ಧತೆ ಹಾಗೂ ಅನುಷ್ಠಾನ:**

| ಕ್ರ.ಸಂ | ಅವಧಿ | ಹಮ್ಮಿಕೊಳ್ಳಬೇಕಾದ ಚಟುವಟಿಕೆಗಳು |
|---|---|---|
| 1 | ದಿನಾಂಕ:11-10-2022 ರಿಂದ 31-10-2022 | 1) ಮಹಿಳೆಯರಿಗೆ ಸಂಬಂಧಿಸಿದ ಉಪ ಸಮಿತಿಗಳಾದ ಬಾಲ ವಿಕಾಸ ಸಮಿತಿ, ಮಹಿಳೆಯರ ಮತ್ತು ಮಕ್ಕಳ ಸಾಗಾಣಿಕೆ ಮತ್ತು ಬಾಲ್ಯ ವಿವಾಹ ತಡೆ ಸಮಿತಿ, ಗ್ರಾಮ ಪಂಚಾಯಿತಿ ಮಟ್ಟದಲ್ಲಿ |

Scanned with CamScanner

| | | |
|---|---|---|
| | | ರಚಿಸಲಾದ ಸ್ವಸಹಾಯ ಸಂಘಗಳ ಫೆಡರೇಷನ್ ಪ್ರತಿನಿಧಿಗಳ ಮತ್ತು ವಿವಿಧ ಇಲಾಖೆ/ಇಲಾಖೇತರ ಭಾಗೀದಾರರ ಸಭೆಯನ್ನು ನಡೆಸುವುದು.<br>2) ಕರಪತ್ರದ ಮೂಲಕ ಮತ್ತು ಸ್ಥಳೀಯ ವಿವಿಧ ಪ್ರಕಾರಗಳನ್ನು ಬಳಸಿ "**ಮಹಿಳಾ ಉದ್ಯೋಗ ಸಬಲೀಕರಣ ಅಭಿಯಾನ**" ಮತ್ತು **ಮಹಿಳಾ ಗ್ರಾಮ ಸಭೆ** ನಡೆಸುವ ಕುರಿತು ವ್ಯಾಪಕ ಪ್ರಚಾರ ಮಾಡುವುದು.<br>3) ಗ್ರಾಮಗಳಲ್ಲಿನ ಎಲ್ಲಾ ಮಹಿಳಾ ಸ್ವ-ಸಹಾಯ/ ಸ್ತ್ರೀಶಕ್ತಿ ಸಂಘಗಳ ಮಹಿಳೆಯರು ಮತ್ತು ಲಿಂಗತ್ವ ಅಲ್ಪಸಂಖ್ಯಾತರಿಗೆ ಅಭಿಯಾನದ ಕುರಿತು ತಿಳಿಯಪಡಿಸಿ, ಸ್ವ-ಸಹಾಯ ಸಂಘದ ಎಲ್ಲಾ ಸದಸ್ಯರು ಮಹಿಳಾ ಗ್ರಾಮಸಭೆಗಳಲ್ಲಿ ಸಕ್ರಿಯವಾಗಿ ಭಾಗವಹಿಸುವಂತೆ ಖಾತರಿ ಪಡಿಸಿಕೊಳ್ಳುವುದು.<br>4) ಸರ್ಕಾರದ ವಿವಿಧ ಇಲಾಖೆಗಳು ಮಹಿಳೆಯರಿಗಾಗಿ ಇರುವ ತಮ್ಮ ಇಲಾಖೆಯ ಯೋಜನೆಗಳನ್ನು ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ಚರ್ಚಿಸಿ ಗ್ರಾಮ ಸಭೆಯಲ್ಲಿ ಮಾಹಿತಿ ನೀಡಲು ಅಗತ್ಯ ವಿವರಗಳನ್ನು ಸಿದ್ಧಪಡಿಸಿಕೊಳ್ಳುವುದು. |
| 2 | ದಿನಾಂಕ:01-11-2022 ರಿಂದ 30-11-2022 | **ಮಹಿಳಾ ಗ್ರಾಮಸಭೆಗಳನ್ನು ಆಯೋಜಿಸುವುದು:**<br>1) ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳಿಂದ ನಿಗದಿಪಡಿಸಲಾದ ದಿನಾಂಕ ಮತ್ತು ಗ್ರಾಮ ಪಂಚಾಯಿತಿ ನಿಗದಿಪಡಿಸಿದ ಸ್ಥಳದಲ್ಲಿ ಗ್ರಾಮ ಪಂಚಾಯಿತಿ ಮಟ್ಟದ ಮಹಿಳಾ ಗ್ರಾಮ ಸಭೆಯನ್ನುನಡೆಸುವುದು.<br>2) ಗ್ರಾಮಸಭೆಯಲ್ಲಿ ಗ್ರಾಮ ಪಂಚಾಯಿತಿಯ ಚುನಾಯಿತ ಸದಸ್ಯರು ಹಾಗೂ ವಿವಿಧ ಇಲಾಖೆಗಳ ಸ್ಥಳೀಯ ಅಧಿಕಾರಿಗಳು ಹಾಜರಾಗುವುದನ್ನು ಖಾತರಿ ಪಡಿಸಿಕೊಳ್ಳಬೇಕು.<br>3) ಗ್ರಾಮ ಪಂಚಾಯತಿ ವ್ಯಾಪ್ತಿಯ ಎಲ್ಲಾ ಲಿಂಗತ್ವ ಅಲ್ಪಸಂಖ್ಯಾತರು ಗ್ರಾಮ ಸಭೆಯಲ್ಲಿ ಭಾಗವಹಿಸುವುದನ್ನು ಖಾತ್ರಿಪಡಿಸಿಕೊಳ್ಳತಕ್ಕದ್ದು.<br>4) ಮಹಿಳೆಯರ ಹಕ್ಕುಗಳು, ನರೇಗಾದ ಉದ್ದೇಶ, ಮಹಿಳಾ ಸುರಕ್ಷತೆ, ಕೆಲಸ ಮಾಡುವ ಮಹಿಳೆಯರ ಮಕ್ಕಳಿಗೆ ಶಿಶುಪಾಲನಾ ಕೇಂದ್ರ ವ್ಯವಸ್ಥೆ, ವೇತನ ಮತ್ತು ಇತರೆ ಅನುಕೂಲತೆಗಳ ಬಗ್ಗೆ ಸಂಕ್ಷಿಪ್ತವಾಗಿ ತಿಳಿಸುವುದು.<br>5) ಮಹಿಳೆಯರ ಹಕ್ಕುಗಳು, ಮಹಿಳೆಯರಿಗಾಗಿ ಸರ್ಕಾರದಿಂದ ಇರುವ ವಿವಿಧ ಯೋಜನೆಗಳು ಮತ್ತು ಸೌಲಭ್ಯಗಳ ಮಾಹಿತಿ ನೀಡುವುದು.<br>6) ಗ್ರಾಮ ಸಭೆ ನಡೆಸುವ ಸಮಯದಲ್ಲಿ **ಸಾಮಾನ್ಯ ಆರೋಗ್ಯ ತಪಾಸಣೆ,** ವಿಶೇಷವಾಗಿ **ರಕ್ತಹೀನತೆ (Anemia)** ತಪಾಸಣಾ ಶಿಬಿರವನ್ನು ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಗಳ ಮತ್ತು ಕೆ.ಎಚ್.ಪಿ.ಟಿ. ತಂಡದ ಸಹಕಾರದೊಂದಿಗೆ ಆಯೋಜಿಸುವುದು.<br>7) ಗ್ರಾಮಸಭೆಯಲ್ಲಿ ದುರ್ಬಲ ವರ್ಗಗಳ ಮತ್ತು ವಿಕಲಚೇತನ ಮಹಿಳೆಯರು ಹಾಗೂ ಲಿಂಗತ್ವ ಅಲ್ಪಸಂಖ್ಯಾತರಿಗೆ ತಮ್ಮ ಬೇಡಿಕೆಗಳ ಕುರಿತು ಚರ್ಚಿಸಲು ಹೆಚ್ಚಿನ ಅವಕಾಶ ನೀಡಬೇಕು.<br>8) ಗ್ರಾಮಸಭೆ ನಡೆಯುವ ಸ್ಥಳದಲ್ಲಿ **"ಗ್ರಾಮ ಪಂಚಾಯತಿ ಡೆಸ್ಕ್"** ವ್ಯವಸ್ಥೆ ಕಲ್ಪಿಸಬೇಕು. ಈ ಡೆಸ್ಕ್‌ನಲ್ಲಿ ಸರ್ಕಾರದ ವಿವಿಧ ಇಲಾಖೆಗಳಿಂದ ಮಹಿಳೆಯರು ಮತ್ತು ಲಿಂಗತ್ವ ಅಲ್ಪಸಂಖ್ಯಾತರಿಗೆ ಸಿಗುವ ಸೌಲಭ್ಯಗಳ ಮಾಹಿತಿಯನ್ನು ಒಳಗೊಂಡ ಕರಪತ್ರಗಳು ಲಭ್ಯವಿರಬೇಕು.<br>ಮಹಾತ್ಮಗಾಂಧಿ ನರೇಗಾ ಯೋಜನೆಯಡಿ |

Scanned with CamScanner

| | | |
|---|---|---|
| | | ನೋಂದಾಯಿತರಲ್ಲದ ಮಹಿಳೆಯರು ಮತ್ತು ಲಿಂಗತ್ವ ಅಲ್ಪಸಂಖ್ಯಾತರನ್ನು ಗುರುತಿಸಿ, ಗ್ರಾಮ ಪಂಚಾಯತಿ ಡೆಸ್ಕ್ ಮೂಲಕ ಸ್ಥಳದಲ್ಲಿಯೇ ನೋಂದಣಿ ಮಾಡಿ ಜಾಬ್‌ಕಾರ್ಡ್ ವಿತರಿಸಬೇಕು.<br>ಸರ್ಕಾರದ ವಿವಿಧ ಇಲಾಖೆಗಳಿಂದ ಮಹಿಳೆಯರು ಮತ್ತು ಲಿಂಗತ್ವ ಅಲ್ಪಸಂಖ್ಯಾತರಿಗೆ ಸಿಗುವ ಸೌಲಭ್ಯಗಳ ಮಾಹಿತಿ ನೀಡಿ ಅರ್ಹ ಫಲಾನುಭವಿಗಳನ್ನು ಪಟ್ಟಿ ಮಾಡಿಕೊಳ್ಳಬೇಕು.<br>9) ನರೇಗಾ ಯೋಜನೆಯಡಿ ನೋಂದಾಯಿತರಾದ ಮಹಿಳೆಯರು ಮತ್ತು ಲಿಂಗತ್ವ ಅಲ್ಪಸಂಖ್ಯಾತರಿಂದ ನಮೂನೆ-6ರಲ್ಲಿ ಕೆಲಸದ ಬೇಡಿಕೆಯನ್ನು ಸ್ವೀಕರಿಸಬೇಕು. ಬೇಡಿಕೆ ಸ್ವೀಕರಿಸಿದ 15 ದಿನಗಳೊಳಗಾಗಿ ಅವರಿಗೆ ಕೆಲಸ ಒದಗಿಸಬೇಕು.<br>10) ನರೇಗಾ ಯೋಜನೆಯಡಿ ನೋಂದಾಯಿತರಾದ ಮಹಿಳೆಯರು ಮತ್ತು ಲಿಂಗತ್ವ ಅಲ್ಪಸಂಖ್ಯಾತರಿಂದ ವೈಯಕ್ತಿಕ ಕಾಮಗಾರಿಗಳ ಬೇಡಿಕೆಯನ್ನು ಸ್ವೀಕರಿಸಿ, ಗ್ರಾಮಸಭೆಯಲ್ಲಿ ಅನುಮೋದಿಸಿ ಕ್ರಿಯಾಯೋಜನೆಯಲ್ಲಿ ಸೇರ್ಪಡೆ ಮಾಡಿಕೊಳ್ಳಬೇಕು.<br>11) ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸ್ವ-ಸಹಾಯ ಸಂಘಗಳು/ಸ್ತ್ರೀ ಶಕ್ತಿ ಸಂಘಗಳು/ಮಹಿಳೆಯರಿಂದ ಸ್ಥಳೀಯವಾಗಿ ತಯಾರಿಸಲಾದ ಬಟ್ಟೆ ಬ್ಯಾಗ್/ಉಡುಪುಗಳು/ಆಟಿಕೆಗಳು/ ಆಕರ್ಷಣೀಯ ವಸ್ತುಗಳನ್ನು/ ಪೌಷ್ಟಿಕ ಆಹಾರ ಪದಾರ್ಥಗಳನ್ನು ಪ್ರದರ್ಶಿಸಲು ಮತ್ತು ಮಾರಾಟ ಮಾಡಲು ಗ್ರಾಮಸಭೆಯಲ್ಲಿ ಅವಕಾಶ ಕಲ್ಪಿಸುವುದು. |

**ಅನುಷ್ಠಾನ ಮತ್ತು ಉಸ್ತುವಾರಿ ಪ್ರಕ್ರಿಯೆ:**

**1. ಗ್ರಾಮ ಪಂಚಾಯಿತಿ:**

- ಗ್ರಾಮ ಪಂಚಾಯಿತಿಗಳ ಅಧ್ಯಕ್ಷರು ಹಾಗೂ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯವರು ಮಹಿಳಾ ಗ್ರಾಮಸಭೆಗಳನ್ನು ನಡೆಸಲು ಸೂಕ್ತ ಕ್ರಮವಹಿಸುವುದು.
- ಮಹಿಳಾ ಗ್ರಾಮ ಸಭೆಯ ದಿನಾಂಕ, ಸಮಯ ಮತ್ತು ಸ್ಥಳ ಕುರಿತು ಮಹಿಳೆಯರಿಗೆ, ಲಿಂಗತ್ವ ಅಲ್ಪಸಂಖ್ಯಾತರಿಗೆ ಎಲ್ಲಾ ಇಲಾಖೆಗಳ ಸ್ಥಳೀಯ ಸಿಬ್ಬಂದಿಗಳಿಗೆ, ಮಹಿಳಾ ಸ್ವಸಹಾಯ/ಸ್ತ್ರೀಶಕ್ತಿ ಗುಂಪುಗಳಿಗೆ, ಸಂಜೀವಿನಿ ಕಾರ್ಯಕ್ರಮದ ಸಿಬ್ಬಂದಿಗಳಿಗೆ, ಸ್ಥಳೀಯ ಮಹಿಳಾ ಮತ್ತು ಯುವತಿ ಸಂಘಗಳಿಗೆ ಮಾಹಿತಿ ನೀಡುವುದು.
- ಪ್ರಸ್ತುತ NRLM ಅಡಿಯಲ್ಲಿ ನೋಂದಾಯಿತ ಸ್ವ-ಸಹಾಯ ಗುಂಪುಗಳ ಮಹಿಳೆಯರನ್ನು ಗ್ರಾಮ ಪಂಚಾಯಿತಿಯ ಗ್ರಂಥಾಲಯಕ್ಕೆ ಸದಸ್ಯತ್ವ ಮಾಡಿಸಿಕೊಳ್ಳುವುದು.
- ಮಹಿಳೆಯರ ಗ್ರಾಮ ಸಭೆಯ ಫೋಟೋ, ವೀಡಿಯೋ, ನಡವಳಿಗಳ ದಾಖಲೀಕರಣ ಮಾಡುವುದು ಹಾಗೂ ಸೂಚಿಸಲಾದ ನಮೂನೆಗಳಲ್ಲಿ ಮಾಹಿತಿಯನ್ನು ನಿಗದಿತ ಸಮಯದಲ್ಲಿ ಮೇಲಾಧಿಕಾರಿಗಳಿಗೆ ಸಲ್ಲಿಸುವುದು ಮತ್ತು ಪಂಚತಂತ್ರ ತಂತ್ರಾಂಶದಲ್ಲಿ ಅಳವಡಿಸುವುದು.

**2. ತಾಲ್ಲೂಕು ಪಂಚಾಯಿತಿ:**

- ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು ತಮ್ಮ ತಾಲ್ಲೂಕಿನ ಅಭಿಯಾನದ ನೋಡಲ್ ಅಧಿಕಾರಿಯಾಗಿ ಜವಾಬ್ದಾರಿ ನಿರ್ವಹಿಸುವುದು.
- ಜಿಲ್ಲೆಯ NRLMನ ಜಿಲ್ಲಾ ಯೋಜನಾ ವ್ಯವಸ್ಥಾಪಕರ ಸಹಯೋಗದಲ್ಲಿ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲೆಯಲ್ಲಿರುವ ಕೌಶಲ್ಯ ತರಬೇತಿ (DDUGKY) ಸಂಬಂಧಿಸಿದ ಯೋಜನಾ ಅನುಷ್ಠಾನದ ಸಂಸ್ಥೆಗಳ (PIA) ಮೂಲಕ ಆಯೋಜಿಸುವ ತರಬೇತಿಗಳು, ತರಬೇತಿಗೆ ನೋಂದಾಯಿಸಿಕೊಳ್ಳುವ ವಿಧಾನ, ತರಬೇತಿಯ ಅವಧಿ, ತರಬೇತಿಯ ಸ್ಥಳ, ತರಬೇತಿಯಿಂದ ಪ್ರಯೋಜನಗಳ ಕುರಿತು ಕಾರ್ಯಾಗಾರವನ್ನು ಎಲ್ಲಾ ಹೋಬಳಿ ಮಟ್ಟಗಳಲ್ಲಿ ಮಹಿಳಾ ಗ್ರಾಮಸಭೆ ನಡೆಸುವ ಮುಂಚೆಯೇ ಆಯೋಜಿಸುವುದು.

Scanned with CamScanner

- ಮಹಿಳಾ ಗ್ರಾಮಸಭೆಗಳ ದಿನಾಂಕಗಳನ್ನು ನಿಗದಿಪಡಿಸಿ, ವೇಳಾಪಟ್ಟಿಯನ್ನು ಪ್ರಕಟಿಸುವುದು ಹಾಗೂ ಸಂಬಂಧಿಸಿದ ಗ್ರಾಮ ಪಂಚಾಯಿತಿಗೆ ತಿಳಿಸುವುದು.
- ತಮ್ಮ ತಾಲ್ಲೂಕಿನ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಮಹಿಳಾ ಉದ್ಯೋಗ ಸಬಲೀಕರಣ ಅಭಿಯಾನದ ಮತ್ತು ಮಹಿಳಾ ಗ್ರಾಮಸಭೆಗಳು ನಡೆಯುವಂತೆ ಸೂಕ್ತ ಕ್ರಮ ಕೈಗೊಳ್ಳುವುದು ಹಾಗೂ ಈ ಪ್ರಕ್ರಿಯೆಯ ಉಸ್ತುವಾರಿ ಮತ್ತು ಪರಿಣಾಮಕಾರಿ ಅನುಷ್ಠಾನಕ್ಕಾಗಿ ಪ್ರತಿ ಗ್ರಾಮ ಪಂಚಾಯಿತಿಗೆ ನೋಡಲ್ ಅಧಿಕಾರಿಯನ್ನು ನಿಯೋಜಿಸುವುದು.
- ಮಹಿಳಾ ಗ್ರಾಮಸಭೆಗಳು ನಡೆಯುವ ದಿನ ವಿವಿಧ ಇಲಾಖೆಗಳ ಸ್ಥಳೀಯ ಅಧಿಕಾರಿಗಳು ಹಾಜರಿರಲು ಸಂಬಂಧಪಟ್ಟ ಇಲಾಖೆಗಳಿಗೆ ಸೂಕ್ತ ನಿರ್ದೇಶನ ನೀಡುವುದು.
- **ವಸ್ತು ಪ್ರದರ್ಶನ:** ಮಹಿಳಾ ಸ್ವ-ಸಹಾಯ ಸಂಘಗಳಿಂದ ತಯಾರಿಸಿದ/ಉತ್ಪಾದಿಸಿದ ಸಾಮಗ್ರಿಗಳ/ಪದಾರ್ಥಗಳ ಪ್ರದರ್ಶನ ಮತ್ತು ಮಾರಾಟ ಮೇಳಗಳನ್ನು ತಾಲ್ಲೂಕು ಪಂಚಾಯಿತಿಯಿಂದ ಆಯೋಜಿಸುವುದು.

**3. ಜಿಲ್ಲಾ ಪಂಚಾಯಿತಿ:**

- ಜಿಲ್ಲಾ ಮಟ್ಟದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಮಹಿಳಾ ಉದ್ಯೋಗ ಸಬಲೀಕರಣ ಅಭಿಯಾನದ ನೋಡಲ್ ಅಧಿಕಾರಿಯಾಗಿ ಜವಾಬ್ದಾರಿ ನಿರ್ವಹಿಸುವುದು.
- ಜಿಲ್ಲೆಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಕ್ಷೇತ್ರದಲ್ಲಿ ಹಾಗೂ ಸರ್ಕಾರದ ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿರುವ ಸ್ವಯಂ ಸೇವಾ ಸಂಸ್ಥೆಗಳನ್ನು ಗುರುತಿಸಿ ಅವರಿಗೆ ಗ್ರಾಮ ಪಂಚಾಯಿತಿಗಳಲ್ಲಿ ತೊಡಗಿಸಿಕೊಳ್ಳಲು ಕ್ರಮವಹಿಸುವುದು.
- ಅಭಿಯಾನದ ಅವಧಿಯಲ್ಲಿ ಗ್ರಾಮ ಪಂಚಾಯತಿಗಳಲ್ಲಿ ಚಟುವಟಿಕೆ/ಕಾರ್ಯಕ್ರಮಗಳು, ಮಹಿಳಾ ಗ್ರಾಮಸಭೆ, ಯೋಜನೆ ತಯಾರಿ ಮತ್ತು ಅನುಷ್ಠಾನ ಪರಿಣಾಮಕಾರಿಯಾಗಿ ಜಾರಿಗೊಳಿಸಿ, ಮಹಿಳಾ ಉದ್ಯೋಗ ಸ್ನೇಹಿ ಗ್ರಾಮ ಪಂಚಾಯಿತಿಗಳನ್ನಾಗಿಸಲು ಪ್ರೇರಣಾತ್ಮಕ ಚಟುವಟಿಕೆಗಳನ್ನು ಕೈಗೊಳ್ಳಲು ನಿರ್ದೇಶನ ನೀಡುವುದು.
- **ಪ್ರದರ್ಶನ ಮತ್ತು ಮಾರಾಟ ಮೇಳಗಳ ಆಯೋಜನೆ:** ಮಹಿಳಾ ಸ್ವ-ಸಹಾಯ ಸಂಘಗಳಿಂದ ತಯಾರಿಸಿದ ಸಾಮಗ್ರಿಗಳ ಪ್ರದರ್ಶನ ಮತ್ತು ಮಾರಾಟ ಮೇಳಗಳನ್ನು ಜಿಲ್ಲಾ ಪಂಚಾಯಿತಿಯಿಂದ ಆಯೋಜಿಸುವುದು.
- **NRLM ವತಿಯಿಂದ ತರಬೇತಿ ಕಾರ್ಯಕ್ರಮ:** ಜಿಲ್ಲೆಯ NRLMನ ಜಿಲ್ಲಾ ಯೋಜನಾ ವ್ಯವಸ್ಥಾಪಕರ ಸಹಯೋಗದಲ್ಲಿ ಜಿಲ್ಲೆಯಲ್ಲಿರುವ ಕೌಶಲ್ಯ ತರಬೇತಿ (DDUGKY) ಸಂಬಂಧಿಸಿದ ಯೋಜನಾ ಅನುಷ್ಠಾನದ ಸಂಸ್ಥೆಗಳ (PIA) ಮೂಲಕ ಆಯೋಜಿಸುವ ತರಬೇತಿಗಳು, ತರಬೇತಿಗೆ ನೋಂದಾಯಿಸಿಕೊಳ್ಳುವ ವಿಧಾನ, ತರಬೇತಿಯ ಅವಧಿ, ತರಬೇತಿಯ ಸ್ಥಳ, ತರಬೇತಿಯಿಂದ ಪ್ರಯೋಜನಗಳ ಕುರಿತು ವಿವರವಾದ ಮಾಹಿತಿಯನ್ನು youtube live ಮೂಲಕ ಎಲ್ಲಾ ಗ್ರಾಮ ಪಂಚಾಯಿತಿಯಲ್ಲಿ ಮಹಿಳೆಯರು ಭಾಗವಹಿಸಿ ವೀಕ್ಷಿಸಲು/ಕೇಳಲು ಅನುಕೂಲವಾಗುವಂತೆ ಜಿಲ್ಲಾ ಪಂಚಾಯಿತಿಯಿಂದ ಸಂಘಟಿಸಿ ಆಯೋಜಿಸುವುದು.

**"ಮಹಿಳಾ ಉದ್ಯೋಗ ಸಬಲೀಕರಣ ಅಭಿಯಾನ"** ಕಾರ್ಯಕ್ರಮದ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಸರ್ಕಾರದ ವಿವಿಧ ಇಲಾಖೆಗಳ ಜಿಲ್ಲಾ ಪಂಚಾಯಿತಿ, ತಾಲ್ಲೂಕು ಮತ್ತು ಗ್ರಾಮ ಪಂಚಾಯಿತಿ ಮಟ್ಟದ ಅಧಿಕಾರಿಗಳು ಭಾಗವಹಿಸುವುದು ಮತ್ತು ಸಮನ್ವಯತೆಯಿಂದ ತಮ್ಮ ಜವಾಬ್ದಾರಿಯನ್ನು ನಿರ್ವಹಿಸುವುದು.

ಆಯುಕ್ತರು, ಗ್ರಾಮೀಣಾಭಿವೃದ್ಧಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

**ಇವರಿಗೆ:**

1. ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ.
2. ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ. (ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ)

Scanned with CamScanner

3. ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಅಧ್ಯಕ್ಷರುಮತ್ತು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ. (ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ)

**ಪ್ರತಿಯನ್ನು ಮಾಹಿತಿಗಾಗಿ:**

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿ.
3) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗೃಹ ಇಲಾಖೆರವರ ಆಪ್ತ ಕಾರ್ಯದರ್ಶಿ.
4) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,ಯೋಜನಾ ಕಾರ್ಯಕ್ರಮಗಳ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ,ಬೆಂಗಳೂರು.
5) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆ,ಬೆಂಗಳೂರು.
6) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ, ಇವರ ಆಪ್ತ ಕಾರ್ಯದರ್ಶಿ.
7) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
8) ಸರ್ಕಾರದ ಪ್ರಧಾನ ಕಾರ್ಯದರ್ಶಿ, (ಪಂಚಾಯತ್ ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು
9) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲ ಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆರವರ ಆಪ್ತ ಕಾರ್ಯದರ್ಶಿ.
10) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆರವರ ಆಪ್ತ ಕಾರ್ಯದರ್ಶಿ.
11) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆರವರ ಆಪ್ತ ಕಾರ್ಯದರ್ಶಿ.
12) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆರವರ ಆಪ್ತ ಕಾರ್ಯದರ್ಶಿ.
13) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಾರ್ಮಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿ
14) ಸರ್ಕಾರದ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆರವರ ಆಪ್ತ ಕಾರ್ಯದರ್ಶಿ.
15) ಸರ್ಕಾರದ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆರವರ ಆಪ್ತ ಕಾರ್ಯದರ್ಶಿ.
16) ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು.
17) ಅಭಿಯಾನ ನಿರ್ದೇಶಕರು, ಸಂಜೀವಿನಿ, ಕೆ.ಎಸ್.ಆರ್.ಎಲ್.ಪಿ.ಎಸ್.ಬೆಂಗಳೂರು.
18) ಆಯುಕ್ತರು, ಗ್ರಾಮೀಣ ಕುಡಿಯು ನೀರು ಸರಭರಾಜು ಮತ್ತು ನೈರ್ಮಲ್ಯ ಇಲಾಖೆ, ಇವರ ಆಪ್ತ ಸಹಾಯಕರು.

Scanned with CamScanner